Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
## ವಾರ್ಡ್ ಸಮಿತಿ ಸಭೆ ದಿನಾಂಕ: 17/10/2020 ರ
## ಸಭಾ ನಡವಳಿ

ದಿನಾಂಕ: 17/10/2020 ರಂದು ಬೆಳಿಗ್ಗೆ 10.00 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ಹಾಜರಿದ್ದವರು:

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳ | ಹುದ್ದೆ |
|---|---|---|
| 1 | ಶ್ರೀ ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರ ಕಛೇರಿ ಕಟ್ಟಡ ಪರವಾನಗೆ ಕೋಶ–ಉತ್ತರ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್–198, ಹೆಮ್ಮಿಗೆಪುರ |
| 3 | ಶ್ರೀ ಬಸವೇಗೌಡ | ಕಂದಾಯ ಪರಿವೀಕ್ಷಕರು, ವಾರ್ಡ್–198 |
| 4 | ಶ್ರೀ ರವಿಚಂದ್ರಚಾರಿ | ಹಿರಿಯ ಆರೋಗ್ಯ ಪರಿವೀಕ್ಷಕರು, ಕೆಂಗೇರಿ |
| 5 | ಶ್ರೀಮತಿ ಮೋನಿಕಾ | ಕಿರಿಯ ಆರೋಗ್ಯ ಪರಿವೀಕ್ಷಕರು |
| 6 | ಶ್ರೀಮತಿ ದೀಪಾ.ವಿ | ಸಹಾಯಕ ಇಂಜಿನಿಯರ್ ಬಿ.ಡಬ್ಲ್ಯೂ.ಎಸ್. ಎಸ್.ಬಿ. |
| 7 | ಶ್ರೀ ಸಾಯಿ ಸಂದೇಶ್ ಬಿ.ಎಸ್. | ಸಹಾಯಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ |
| 8 | ಶ್ರೀ ಅಶೋಕ್ ಹೆಂಡಗಾರ್ | ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ |
| 9 | ಶ್ರೀ ಜಿ.ಮೂರ್ತಿ | ಸಹಾಯಕ ಕಂದಾಯ ಅಧಿಕಾರಿ |

Scanned with CamScanner

| | | |
|---|---|---|
| 10 | ಶ್ರೀ ಸುರೇಶ್ ಎಂ.ಎಸ್ | ಸಹಾಯಕ ಕಾರ್ಯಪಾಲಕ ಅಭಿಯಂತರರು<br>ರಸ್ತೆ ಮೂಲಭೂತ ಸೌಕರ್ಯ,<br>ರಾಜರಾಜೇಶ್ವರಿನಗರ ವಿಭಾಗ |
| 11 | ಶ್ರೀ ಚಂದ್ರಶೇಖರ್.ಹೆಚ್ | ಸಹಾಯಕ ಅಭಿಯಂತರರು<br>ಬೆಸ್ಕಾಂ |

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯಲ್ಲಿನಂತೆ ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

1) **<u>ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ</u>**:- ಅಧ್ಯಕ್ಷರು, ಕೋವಿಡ್-19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂದ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್-19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್-19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು.

2) **<u>ಕುಡಿಯುವ ನೀರು ಹಾಗೂ ಒಳಚರಂಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ</u>**:- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬೆಂಗಳೂರು ಜಲ ಮಂಡಳಿ ರವರು ಡಾಂಬರು ರಸ್ತೆಗಳನ್ನು ಅಗೆಯುತ್ತಿದ್ದು, ಕೊಳವೆ ಸಾಲುಗಳನ್ನು ಅಳವಡಿಸಿದ ನಂತರ ರಸ್ತೆಯನ್ನು ದುರಸ್ಥಿ ಪಡಿಸದೇ ಹಾಗೂ ಹೊಸದಾಗಿ ನಿರ್ಮಾನ ಮಾಡಿರುವ ಡಾಂಬರು ರಸ್ತೆಗಳನ್ನು ಅಗೆಯುತ್ತಿರುವ ಬಗ್ಗೆ ಮತ್ತು ಬಿ.ಜಿ.ಎಸ್. ಹತ್ತಿರವಿರುವ ಸಪ್ತಗಿರಿ ಕೌಂಟಿ ಬಡಾವಣೆಯಲ್ಲಿ ಒಳಚರಂಡಿ ನೀರು ಹತ್ತಿರದಲ್ಲೇ ಇರುವ ಕೆರೆಗೆ ಹರಿದುಹೋಗುತ್ತಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಅಧ್ಯಕ್ಷರು ಮಾತನಾಡಿ ಜಲ ಮಂಡಳಿಯವರು ಪೈಪ್‌ಲೈನ್ ಅಳವಡಿಸುವ ಮುನ್ನ 06 ತಿಂಗಳು ಮುಂಚಿತವಾಗಿ ರಸ್ತೆಯನ್ನು ಅಗೆಯಬೇಕಾಗಿರುವ ಬಗ್ಗೆ ಹಾಗೂ ಪೈಪ್‌ಲೈನ್ ಅಳವಡಿಸುವ ಬಗ್ಗೆ ಲಿಖಿತವಾಗಿ ಪಾಲಿಕೆಯ

Scanned with CamScanner

ಗಮನಕ್ಕೆ ತರಬೇಕೆಂದು ಹಾಗೂ ಸಪ್ತಗಿರಿ ಕೌಂಟಿ ಬಡಾವಣೆಯಲ್ಲಿ ಕಲುಷಿತ ನೀರು ಕೆರೆಗೆ ಸೇರುತ್ತಿರುವುದನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲು ಜಲ ಮಂಡಳಿಯವರಿಗೆ ಸೂಚಿಸಿದರು.

3) ಘನತ್ಯಾಜ್ಯ ನಿರ್ವಹಣೆ ಬಗ್ಗೆ:- ವಾರ್ಡ್ ನಂ.198ರ ಮಹಾವೀರ್ ಲೇಕ್ ಅಪಾರ್ಟ್‌ಮೆಂಟ್ ಹಿಂಭಾಗದ ರಸ್ತೆಯಲ್ಲಿ ಅಪರಿಚಿತರು ತ್ಯಾಜ್ಯವನ್ನು ಪ್ಲಾಸ್ಟಿಕ್ ಕವರಿನಲ್ಲಿ ಕಟ್ಟಿ ಎಸೆದು ಹೋಗುತ್ತಿರುವ ಬಗ್ಗೆ ಹಾಗೂ ಇದರಿಂದಾಗಿ ಬ್ಲಾಕ್‌ಸ್ಪಾಟ್ ನಿರ್ಮಾಣವಾಗಿರುವ ಬಗ್ಗೆ ಹಾಗೂ ಸೊಳ್ಳೆಗಳ ನಿಯಂತ್ರಣಕ್ಕೆ ಸ್ಪ್ರೇ ಹಾಗೂ ಫಾಗಿಂಗ್‌ನ್ನು ಮಾಡುತ್ತಿಲ್ಲವೆಂದು ಸಭೆಯ ಗಮನಕ್ಕೆ ತಿಳಿಸಿದರು. ಈ ಸಂಬಂಧ ವಾರ್ಡ್‌ನ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಸದರಿ ಪ್ರದೇಶವು ನಿರ್ಜನ ಪ್ರದೇಶವಾಗಿದ್ದು, ಸದರಿ ರಸ್ತೆಯಲ್ಲಿ ಹಾದುಹೋಗುವ ಸಾರ್ವಜನಿಕರು ರಾತ್ರಿ ವೇಳೆಯಲ್ಲಿ ಕಸವನ್ನು ಎಸೆದು ಹೋಗುತ್ತಿರುವುದಾಗಿ ತಿಳಿಸಿದರು. ಈ ಸಂಬಂಧ ಅಧ್ಯಕ್ಷರು ಮಾತನಾಡಿ ಸದರಿ ಸ್ಥಳದಲ್ಲಿ ತ್ಯಾಜ್ಯ ಸುರಿದರೆ ದಂಡ ವಿಧಿಸುವುದಾಗಿ ಒಂದು ನಾಮಫಲಕವನ್ನು ಅಳವಡಿಸಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.

4) ವಿದ್ಯುತ್ ಬೀದಿ ದೀಪಗಳ ನಿರ್ವಹಣೆ:- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಕೆಂಗೇರಿ, ಉತ್ತರಹಳ್ಳಿ ಮುಖ್ಯರಸ್ತೆಯಲ್ಲಿ ಬಿ.ಜಿ.ಎಸ್. ಸರ್ಕಲ್‌ನಿಂದ ಸಾವನ್ ದರ್ಬಾರ್ ಆಶ್ರಮದ ವರೆಗೆ ರಾತ್ರಿವೇಳೆ ಬೀದಿ ದಿಪಗಳು ಇಲ್ಲದ ಕಾರಣ ಸಾರ್ವಜನಿಕರು ಸಂಚರಿಸಲು ತೀವ್ರ ತೊಂದರೆಯಾಗಿರುವ ಬಗ್ಗೆ ಹಾಗೂ ವಿದ್ಯುತ್ ದೀಪಗಳ ಕೆಳಗೆ ಮರಗಳು ಬೆಳೆದು ಕತ್ತಲು ಆವತರಿಸಿರುವುದನ್ನು ಸಭೆಯ ಗಮನಕ್ಕೆ ತರಲಾಯಿತು ಮತ್ತು ವಿದ್ಯುತ್ ದೀಪಗಳಿಗೆ ಸ್ವಿಚ್ ಹಾಗೂ ಟೈಮರ್‌ಗಳು ಇಲ್ಲದಿರುವ ಬಗ್ಗೆ ಮತ್ತು ದೀಪಗಳನ್ನು ವಿದ್ಯುತ್ ತಂತಿಗಳನ್ನು ಜೋಡಣೆ ಮಾಡುವ ಮೂಲಕ ಸಾರ್ವಜನಿಕರೇ ಆನ್ ಮತ್ತು ಆಫ್ ಮಾಡಬೇಕಾಗಿ ಸಭೆಗೆ ತಿಳಿಸಿದರು. ಈ ಸಂಬಂಧ ವಿದ್ಯುತ್ ಗುತ್ತಿಗೆದಾರರು ಮಾತನಾಡಿ ಸದರಿ ರಸ್ತೆಯಲ್ಲಿನ ವಿದ್ಯುತ್ ದೀಪಗಳನ್ನು ದುರಸ್ಥಿಪಡಿಸುವುದಾಗಿ ಹಾಗೂ ಟೈಮರ್ ಯಂತ್ರವು ಪದೇ ಪದೇ ಸುಟ್ಟುಹೋಗುತ್ತಿರುವುದಾಗಿ ಸಭೆಗೆ ತಿಳಿಸಿದರು. ಈ ಸಂಬಂಧ ಮಾನ್ಯ ಅಧ್ಯಕ್ಷರು ಮಾತನಾಡಿ ವಿದ್ಯುತ್ ದೀಪವನ್ನು ತುರ್ತಾಗಿ ದುರಸ್ಥಿಪಡಿಸಲು ಮತ್ತು ಮರಗಳ ಕೊಂಬೆಗಳನ್ನು ಕಡಿದು ಬೆಳಕು ಬರುವಂತೆ ಮಾಡಲು ಸೂಚಿಸಿದರು ಮತ್ತು ಈ ಸಂಬಂಧ ಮಾನ್ಯ ಜಂಟಿ ಆಯುಕ್ತರು, ರಾ.ರಾ.ನಗರ ವಲಯ ರವರ ಗಮನಕ್ಕೆ ತರಲಾಗುವುದೆಂಬ ವಿಷಯನ್ನು ಸಭೆಗೆ ತಿಳಿಸಿದರು.

Scanned with CamScanner

5) <u>ಬೆಂಗಳೂರು ವಿದ್ಯುತ್ ಸರಬರಾಜು ನಿಗಮ</u>:- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಸಾವನ್ ದರ್ಬಾರ್ ಆಶ್ರಮದ ಪಕ್ಕದ ರಸ್ತೆಯಲ್ಲಿ ವಿದ್ಯುತ್ ಕಂಬಗಳು ರಸ್ತೆಯ ಮಧ್ಯ ಭಾಗದಲ್ಲಿ ಇರುವ ಬಗ್ಗೆ ಹಾಗೂ ಇದರಿಂದ ವಾಹನಗಳು ಅಪಘಾತವಾಗುವ ಬಗ್ಗೆ ಹಾಗೂ ಬಿ.ಹೆಚ್.ಇ.ಎಲ್ ಬಡಾವಣೆಯಲ್ಲಿ ಅಲ್ಯುಮೀನಿಯಂ ವಿದ್ಯುತ್ ಕೇಬಲ್‌ಗಳು ನೇತಾಡುತ್ತಿದ್ದು, ಅಪಾಯ ಸಂಭವಿಸುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಬೆಸ್ಕಾಂ ಅಧಿಕಾರಿಗಳು ಸದರಿ ರಸ್ತೆಯ ಬಡಾವಣೆಯು ಖಾಸಗಿ ಬಡಾವಣೆಯಾಗಿದ್ದು, ಬೆಸ್ಕಾಂಗೆ ಹಣವನ್ನು ಪಾವತಿಸಿದರೆ ರಸ್ತೆ ಮಧ್ಯಭಾಗದಲ್ಲಿರುವ ವಿದ್ಯುತ್ ಕಂಬಗಳನ್ನು ಸ್ಥಳಾಂತರಿಸಿಕೊಡುವುದಾಗಿ ಸಭೆಗೆ ತಿಳಿಸಿದರು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಅಲುಮಿನಿಯಂ ವಿದ್ಯುತ್ ವೈರ್‌ಗಳನ್ನು ತೆಗೆದು ಕೇಬಲ್‌ಗಳನ್ನು ಅಳವಡಿಸುತ್ತಿರುವುದಾಗಿ ಸಭೆಗೆ ತಿಳಿಸಿದರು. ಈ ಸಂಬಂಧ ಅಧ್ಯಕ್ಷರು ಮಾತನಾಡಿ ಅಂದಾಜು ಪಟ್ಟಿಯನ್ನು ಸಲ್ಲಿಸಲು ಬೆಸ್ಕಾಂ ಅಧಿಕಾರಿಯವರಿಗೆ ತಿಳಿಸಿದರು.

6) <u>ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ</u>:- (1) ವಾರ್ಡ್ ನಂ.198ರಲ್ಲಿ ಎಲ್.ಜಿ. ಗೋಡೋನ್ ಹಿಂಭಾಗದ ರಸ್ತೆಯಲ್ಲಿ ಇತ್ತೀಚೆಗೆ ಕಲ್ವರ್ಟ್ ಮಾಡಲಾಗಿದ್ದು, ಸ್ಥಳದಲ್ಲಿ ಉಳಿದ ಜಲ್ಲಿ ಹಾಗೂ ಇತರೆ ಸಾಮಾಗ್ರಿಗಳನ್ನು ಸ್ಥಳಾಂತರಿಸಲು ಮತ್ತು ಮಳೆ ನೀರು ಚರಂಡಿಯಲ್ಲಿ ಹೂಳನ್ನು ತೆಗೆಯಲು ಸಭೆಗೆ ಕೋರಿದರು. ಈ ಸಂಬಂಧ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ಸದರಿ ಕಲ್ವರ್ಟ್ ಕಾಮಗಾರಿಯು ರಸ್ತೆ ಮೂಲಭೂತ ಸೌಕರ್ಯ ವತಿಯಿಂದ ನಿರ್ಮಾಣವಾಗಿದ್ದು, ಮುಂದುವರೆದಂತೆ ಚರಂಡಿಯಲ್ಲಿ ತುಂಬಿರುವ ಹೂಳನ್ನು ತೆಗೆಯಲು ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು. ಈ ಸಂಬಂಧ ಮಾನ್ಯ ಅಧ್ಯಕ್ಷರು ಮಾತನಾಡಿ ಸ್ಥಳದಲ್ಲಿರುವ ಡೆಬ್ರೀಸ್‌ಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲು ಪಾಲಿಕೆಯ ರಸ್ತೆ ಮೂಲಭೂತ ಸೌಕರ್ಯದ ಅಧಿಕಾರಿಗಳಿಗೆ ಸೂಚಿಸಿದರು.

(2) ವಾರ್ಡ್ ನಂ.198ರಲ್ಲಿ ಬೃಹತ್ ನೀರುಗಾಲುವೆ ವತಿಯಿಂದ ಮಳೆನೀರು ಕಾಲುವೆಗೆ ಎರಡೂ ಬದಿಯಲ್ಲಿ ತಡೆಗೋಡೆ ನಿರ್ಮಾಣ ಮಾಡುತ್ತಿದ್ದು, ಗೋಡೆಯ ಎತ್ತರವನ್ನು ಎರಡೂ ಕಡೆ ಸಮಾನಾಂತರವಾಗಿ ಎತ್ತರಿಸಬೇಕೆಂದು ಸಭೆಯ ಗಮನಕ್ಕೆ ತಿಳಿಸಿದರು. ಈ ಸಂಬಂಧ ಬೃಹತ್ ನೀರುಗಾಲುವೆ ವಿಭಾಗದ ಸಹಾಯಕ ಅಭಿಯಂತರರು ಮಾತನಾಡಿ ತಾಂತ್ರಿಕ ವಿನ್ಯಾಸದ ರೀತ್ಯ ತಡೆಗೋಡೆಯ ಎತ್ತರವನ್ನು ನಿಗಧಿಪಡಿಸಿರುವುದಾಗಿ ಸಭೆಗೆ ತಿಳಿಸಿದರು.

Scanned with CamScanner

(3) ವಾರ್ಡ್ ನಂ.198ರಲ್ಲಿ ಬಿ.ಹೆಚ್.ಇ.ಎಲ್ ಬಡಾವಣೆ ಹಾಗೂ ಕಾನ್‌ಕಾರ್ಡ್ ಬಡಾವಣೆಯಲ್ಲಿ ಅಭಿವೃದ್ಧಿ ಕಾಮಗಾರಿ ಮಂಜೂರಾಗಿದ್ದು, ಇದುವರೆವಿಗೂ ಕೆಲಸ ಪ್ರಾರಂಭಿಸದೇ ಇರುವುದರ ಬಗ್ಗೆ ಸಭೆಯ ಗಮನಕ್ಕೆ ತಂದರು. ಈ ಬಗ್ಗೆ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ಸದರಿ ಕಾಮಗಾರಿಯ ಟೆಂಡರ್ ಪ್ರಕ್ರಿಯೆಯಲ್ಲಿದ್ದು, ಗುತ್ತಿಗೆದಾರರು ಭದ್ರತಾ ಠೇವಣಿಯನ್ನು ಪಾಲಿಕೆಗೆ ಪಾವತಿಸಬೇಕಾಗಿರುವ ಬಗ್ಗೆ ಸಭೆಗೆ ತಿಳಿಸಿದರು. ಈ ಸಂಬಂಧ ಅಧ್ಯಕ್ಷರು ಮಾತನಾಡಿ ಕಾರ್ಯಪಾಲಕ ಅಭಿಯಂತರರು ಕೆಂಗೇರಿ ವಿಭಾಗ ರವರ ಕಛೇರಿಯಲ್ಲಿ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದರು.

(4) ಪಟ್ಟಣಗೆರೆಯ ಬಿ.ಹೆಚ್.ಇ.ಎಲ್ ಬಡಾವಣೆಯ 60 ಅಡಿ ರಸ್ತೆಯಲ್ಲಿ ವಾಹನಗಳು ಅತಿ ವೇಗವಾಗಿ ಸಂಚರಿಸುತ್ತಿದ್ದು, ಸದರಿ ರಸ್ತೆಯಲ್ಲಿ ರಸ್ತೆ ಉಬ್ಬನ್ನು ನಿರ್ಮಿಸಲು ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಅಧ್ಯಕ್ಷರು ಮಾತನಾಡಿ ಟ್ರಾಫಿಕ್ ಸಂಚಾರಿ ಪೊಲೀಸರ ಅಭಿಪ್ರಾಯದೊಂದಿಗೆ ಪಾಲಿಕೆಯ ಟ್ರಾಫಿಕ್ ಇಂಜಿನಿಯರಿಂಗ್ ಸೆಲ್‌ರವರಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದೆಂದು ಸಭೆಯ ಗಮನಕ್ಕೆ ತಂದರು.

(ದಯಾನಂದ.ಎನ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್-198, ಹೆಮ್ಮಿಗೆಪುರ

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್-198, ಹೆಮ್ಮಿಗೆಪುರ

ಪ್ರತಿಯನ್ನು:-

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಕಳುಹಿಸಿದೆ.

Scanned with CamScanner

8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

12) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

13) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

Scanned with CamScanner